**NOVEMBER 23,2024**
**ALL INDIA RADIO- DHARWAD**
**PRADESH SAMACHARA (KANNADA) 12PM**

<><><>

ಆಕಾಶವಾಣಿ

ಪ್ರದೇಶ ಸಮಾಚಾರ

ಓದಿದವವರು: ವಿವೇಕಾದಿತ್ಯ ಕನಿಯಾಲ

<><><>

ರಾಜ್ಯದ ಮೂರು ವಿಧಾನಸಭಾ ಕ್ಷೇತ್ರಗಳಾದ, ಬಳ್ಳಾರಿಯ ಸಂಡೂರು, ಹಾವೇರಿಯ ಶಿಗ್ಗಾಂವ ಹಾಗೂ ಬೆಂಗಳೂರು ಗ್ರಾಮಾಂತರ ಜಿಲ್ಲೆ, ಚನ್ನಪಟ್ಟಣದ ಉಪ ಚುನಾವಣೆ ಮತ ಎಣಿಕೆ ಕಾರ್ಯ ಪ್ರಗತಿಯಲ್ಲಿದೆ. ನಮ್ಮ ಆಯಾ ಜಿಲ್ಲೆಗಳ ಪ್ರತಿನಿಧಿಗಳ ವರದಿ ಪ್ರಕಾರ, ಇನ್ನೂ ಸಂಡೂರು ವಿಧಾನಸಭಾ ಕ್ಷೇತ್ರದಲ್ಲಿ ಕಾಂಗ್ರೆಸ್ ಅಭ್ಯರ್ಥಿ ಅನ್ನಪೂರ್ಣಾ ತುಕಾರಾಂ, ಚನ್ನಪಟ್ಟಣ ವಿಧಾನಸಭಾ ಕ್ಷೇತ್ರದಲ್ಲಿ ಕಾಂಗ್ರೆಸ್ ಹುರಿಯಾಳು ಸಿ.ಪಿ. ಯೋಗೇಶ್ವರ ಹಾಗೂ ಶಿಗ್ಗಾಂವಿಯಲ್ಲಿ, ಯಾಸಿರ್ ಅಹ್ಮದ್ ಖಾನ್ ಫಠಾಣ್, ತಮ್ಮ ಸಮೀಪದ ಪ್ರತಿಸ್ಪರ್ಧಿ ಎನ್.ಡಿ.ಎ. ಅಭ್ಯರ್ಥಿಗಳ ವಿರುದ್ಧ, ಗಣನೀಯ ಮುನ್ನಡೆ ಸಾಧಿಸಿದ್ದಾರೆ. 11 ಗಂಟೆ 50 ನಿಮಿಷದವರೆಗೆ ಬಂದ ವರದಿಗಳ ಪ್ರಕಾರ, ಸಂಡೂರು ವಿಧಾನಸಭಾ ಕ್ಷೇತ್ರದಲ್ಲಿ, ಕಾಂಗ್ರೆಸ್ ಅನ್ನಪೂರ್ಣಾ ತುಕಾರಾಂ_ 93 ಸಾವಿರದ 51 ಮತಗಳನ್ನು ಪಡೆದು, ಮುನ್ನಡೆ ಸಾಧಿಸಿದ್ದಾರೆ. ಬಿಜೆಪಿಯ ಬಂಗಾರು ಹನುಮಂತ, 83 ಸಾವಿರದ 483 ಮತಗಳನ್ನು ಪಡೆದಿದ್ದಾರೆ. ಮತ ಎಣಿಕೆ ಮುಂದುವರೆದಿದೆ. ಶಿಗ್ಗಾಂವಿ ಕ್ಷೇತ್ರದಲ್ಲಿ ಕಾಂಗ್ರೆಸ್‌ನ, ಯಾಸಿರ್ ಅಹಮದ್ ಖಾನ್ ಪಠಾಣ್ 83 ಸಾವಿರದ 470 ಮತಗಳನ್ನು ಪಡೆದು, ಮುನ್ನಡೆ ಸಾಧಿಸಿದ್ದರೆ, ಬಿಜೆಪಿ ಅಭ್ಯರ್ಥಿ ಭರತ ಬೊಮ್ಮಾಯಿ 69 ಸಾವಿರದ 972 ಮತಗಳನ್ನು ಪಡೆದಿದ್ದಾರೆ. 14 ನೇ ಸುತ್ತಿನ ಮತ ಎಣಿಕೆ ಪೂರ್ಣಗೊಂಡಿದೆ. ಚನ್ನಪಟ್ಟಣದಲ್ಲಿ ವಿಧಾನಸಭಾ ಕ್ಷೇತ್ರದಲ್ಲಿ ಕಾಂಗ್ರೆಸ್ ಅಭ್ಯರ್ಥಿ ಸಿ.ಪಿ ಯೋಗೇಶ್ವರ 84 ಸಾವಿರದ 166_ಮತಗಳನ್ನು ಪಡೆದಿದ್ದು, ಮುನ್ನಡೆ ಸಾಧಿಸಿದ್ದಾರೆ. ಸಮೀಪದ ಪ್ರತಿಸ್ಪರ್ಧಿ ಎನ್.ಡಿ.ಎ ಮೈತ್ರಿಕೂಟದ ಅಭ್ಯರ್ಥಿ ನಿಖಿಲ್ ಕುಮಾರಸ್ವಾಮಿ, 59 ಸಾವಿರದ 914_ ಮತಗಳನ್ನು ಪಡೆದಿದ್ದಾರೆ. 15 ನೇ ಸುತ್ತಿನ ಮತ ಎಣಿಕೆ ಆರಂಭವಾಗಿದೆ.

<><><>

ಮಕ್ಕಳೇ ಸಮಾಜದ ಅಡಿಪಾಯ ಮತ್ತು ದೇಶದ ಭವಿಷ್ಯ. ಶಿಸ್ತು, ಶ್ರದ್ಧೆ, ಸಮಯ ಪಾಲನೆ, ಜೀವನದ ಮೌಲ್ಯಗಳ ಕಲಿಕೆಯನ್ನು, ಶಿಕ್ಷಣದ ಜೊತೆ ಮೈಗೂಡಿಸಿಕೊಂಡು, ಸನ್ಮಾರ್ಗದಲ್ಲಿ ನಡೆಯಬೇಕು ಎಂದು, ರಾಜ್ಯಪಾಲ ಥಾವರಚಂದ್ ಗೆಹ್ಲೋಟ್ ಆಶಿಸಿದ್ದಾರೆ. 'ಚಿಲ್ಡ್ರನ್ಸ್ ಸ್ಪೇಸ್ ಕ್ಲಬ್ ಆಫ್ ಇಂಡಿಯಾ ಸಂಸ್ಥೆ'ಯ ಮಕ್ಕಳು, ಬೆಂಗಳೂರಿನ ರಾಜಭವನದಲ್ಲಿ, ರಾಜ್ಯಪಾಲರನ್ನು ಭೇಟಿ ಮಾಡಿ, ಸಂವಾದ ನಡೆಸಿದರು.

<><><>

ಆಹಾರ ಧಾನ್ಯಗಳನ್ನು ಅತ್ಯಂತ ದಕ್ಷತೆಯಿಂದ ಸಂಗ್ರಹಿಸಿದಲ್ಲಿ, ಆಹಾರ ಭದ್ರತೆ ಖಾತ್ರಿ ಪಡಿಸಬಹುದಾಗಿದೆ. ಪೌಷ್ಟಿಕ ಆಹಾರವನ್ನು ಎಲ್ಲರಿಗೂ ತಲುಪಿಸಲು, ಧಾನ್ಯ ಸಂಗ್ರಹಣಾ ಮೂಲಸೌಕರ್ಯ ಬಲಪಡಿಸುವುದು ಅತ್ಯಗತ್ಯ ಎಂದು, ಕೇಂದ್ರ ಆಹಾರ ಮತ್ತು ನಾಗರಿಕ ಪೂರೈಕೆ ಖಾತೆ ಸಚಿವ ಪ್ರಲ್ಹಾದ ಜೋಶಿ ತಿಳಿಸಿದ್ದಾರೆ.

ಸಾಮಾಜಿಕ ಮಾಧ್ಯಮ ಎಕ್ಸ್ ನಲ್ಲಿ, ಈ ವಿಷಯ ತಿಳಿಸಿರುವ ಸಚಿವರು, ದೇಶದ ಆಹಾರ ಧಾನ್ಯ ಸಂಗ್ರಹಣಾ ಸಾಮರ್ಥ್ಯ ಹಾಗೂ ಧಾನ್ಯ ಖರೀದಿ ಮತ್ತು ಸಾರ್ವಜನಿಕ ವಿತರಣಾ ವ್ಯವಸ್ಥೆ ಬಲ ಪಡಿಸಲು ಕ್ರಮ ಕೈಗೊಂಡಿದ್ದಾಗಿ, ತಿಳಿಸಿದ್ದಾರೆ.

<><><>

ಪ್ರಕೃತಿ ಸಂರಕ್ಷಣೆ ಜೊತೆಗೆ, ಆರೋಗ್ಯ ಕಾಪಾಡಿಕೊಳ್ಳಲು ಆದ್ಯತೆ ನೀಡಿ, ಸಾವಯವ ಕೃಷಿಗೆ ಒತ್ತು ನೀಡಬೇಕಿದೆ ಎಂದು, ಧಾರವಾಡ ಭಾರತೀಯ ತಂತ್ರಜ್ಞಾನ ಸಂಸ್ಥೆ ನಿರ್ದೇಶಕ ವೆಂಕಪ್ಪಯ್ಯ ದೇಸಾಯಿ, ಹೇಳಿದ್ದಾರೆ. ಬಾಗಲಕೋಟೆಯ, ತೋಟಗಾರಿಕೆ ವಿಶ್ವವಿದ್ಯಾಲಯದ ಪ್ರೇಕ್ಷಾಗೃಹದಲ್ಲಿ, 16ನೇ ಸಂಸ್ಥಾಪನಾ ದಿನಾಚರಣೆಯಲ್ಲಿ ಪಾಲ್ಗೊಂಡು, ಅವರು ಮಾತನಾಡಿದರು. ವಿಶ್ವದಲ್ಲಿಯೇ ಸರ್ವಾಧಿಕ, ಶೇಕಡ 40 ರಿಂದ 45 ರಷ್ಟು ಕೃಷಿ ಯೋಗ್ಯ ಭೂಮಿ ಹೊಂದಿರುವ ದೇಶಗಳ ಪೈಕಿ, ಭಾರತವೂ ಒಂದು. ಫಲವತ್ತತೆ ಕಾಯ್ದುಕೊಂಡು, ದೇಸಿ ಬೀಜ ಬ್ಯಾಂಕ್‌ಗಳ ಮೂಲಕ, ದೇಶಿ ತಳಿಗಳ ಬೀಜ ಸಂಗ್ರಹಣೆ ಮತ್ತು ಬಳಕೆ ಹೆಚ್ಚಿಸುವತ್ತ ಗಮನಹರಿಸಬೇಕಿದೆ ಎಂದರು.

ತೋಟಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾಲಯದ ಉಪ ಕುಲಪತಿ ವಿಷ್ಣುವರ್ಧನ ಮಾತನಾಡಿ, 47 ಕೋಟಿ ರೂಪಾಯಿ ವೆಚ್ಚದಲ್ಲಿ, ಹವಾಮಾನ ನಿಯಂತ್ರಣ ಬೆಳೆ ಯೋಜನೆ ಹಾಕಿಕೊಳ್ಳಲಾಗಿದೆ ಎಂದರು.

<><><>

ಮಂಡ್ಯದಲ್ಲಿ ಡಿಸೆಂಬರ್ ನಲ್ಲಿ ಆಯೋಜಿತ, 87ನೇ ಅಖಿಲ ಭಾರತ ಕನ್ನಡ ಸಾಹಿತ್ಯ ಸಮ್ಮೇಳನದ ವೇದಿಕೆ ಸಿದ್ಧಪಡಿಸಲು, ಜಿಲ್ಲಾ ಉಸ್ತುವಾರಿ ಸಚಿವ ಎನ್.ಚಲುವರಾಯಸ್ವಾಮಿ ಭೂಮಿ ಪೂಜೆ, ನೆರವೇರಿಸಿದ್ದಾರೆ. ಮಂಡ್ಯದ ಹೊರವಲಯದ ಸ್ಯಾಂಜೋ ಆಸ್ಪತ್ರೆ ಬಳಿ, 50 ಎಕರೆ ವಿಸ್ತೀರ್ಣದಲ್ಲಿ ನಿರ್ಮಾಣವಾಗುತ್ತಿರುವ ಬೃಹತ್ ವೇದಿಕೆಗೆ ಭೂಮಿ ಪೂಜೆ ನೆರವೇರಿಸಲಾಯಿತು.

<><><>

ಚಿಕ್ಕಬಳ್ಳಾಪುರ ತಾಲೂಕು, ಜಡಲತಿಮ್ಮನಹಳ್ಳಿ ಗ್ರಾಮಕ್ಕೆ ಸಂಪರ್ಕ ಕಲ್ಪಿಸುವ ರಸ್ತೆಯನ್ನು, ಒಂದು ಕೋಟಿ ರೂಪಾಯಿ ವೆಚ್ಚದಲ್ಲಿ, ಅಭಿವೃದ್ಧಿಪಡಿಸಲಾಗುವುದು ಎಂದು, ಶಾಸಕ ಪ್ರದೀಪ ಈಶ್ವರ ತಿಳಿಸಿದ್ದಾರೆ.

<><><>

ವಾಡಿ ಸಂಸ್ಥೆಯ ಮುಖಸ್ಥರಾದ ಅನಿತಾ ಆರ್. ನೇತೃತ್ವದಲ್ಲಿ, ಕಲಬುರಗಿ ಕೇಂದ್ರ ಕಾರಾಗೃಹದಲ್ಲಿ, ವಿಚಾರಣಾಧೀನ ಕೈದಿಗಳ ಮನಃಪರಿವರ್ತನೆಗಾಗಿ, ಅದಾನಿ ಸಕ್ಷಮ ಕೌಶಲ ಅಭಿವೃದ್ಧಿ, ವಾಡಿ ಸಹಯೋಗದಲ್ಲಿ ಆಯೋಜಿಸಿದ್ದ, ಸಿನೆಮಾ ಪ್ರದರ್ಶನ ಕಾರ್ಯಕ್ರಮ ಜರುಗಿತು.

<><><>

ಯಾದಗಿರಿ ಜಿಲ್ಲೆಯಲ್ಲಿ, ಸಮಾಜ ಕಲ್ಯಾಣ, ಹಿಂದುಳಿದ ವರ್ಗ, ಅಲ್ಪಸಂಖ್ಯಾತ ಕಲ್ಯಾಣ ಇಲಾಖೆ ಅಧೀನದ ವಿದ್ಯಾರ್ಥಿ ವಸತಿ ನಿಲಯಗಳಲ್ಲಿ, ಅಗತ್ಯ ಮೂಲಸೌಕರ್ಯಗಳನ್ನು ಆದ್ಯತೆ ಮೇಲೆ ಖಾತ್ರಿ ಪಡಿಸುವಂತೆ, ಜಿಲ್ಲಾ ಉಸ್ತುವಾರಿ ಸಚಿವ ಶರಣಬಸಪ್ಪ ದರ್ಶನಾಪುರ ಅಧಿಕಾರಿಗಳಿಗೆ ಸೂಚಿಸಿದ್ದಾರೆ. ಯಾದಗಿರಿ ಜಿಲ್ಲಾ ಪಂಚಾಯಿತಿ ಸಭಾಂಗಣದಲ್ಲಿ ಜರುಗಿದ, ಕರ್ನಾಟಕ ಅಭಿವೃದ್ಧಿ ಕಾರ್ಯಕ್ರಮಗಳ, ತ್ರೈಮಾಸಿಕ ಪ್ರಗತಿ ಪರಿಶೀಲನಾ ಸಭೆಯಲ್ಲಿ, ಅವರು ಮಾತನಾಡಿದರು. ವಸತಿ ನಿಲಯಗಳಲ್ಲಿ ಸಮರ್ಪಕ ನೀರಿನ ಸೌಕರ್ಯ ಹಾಗೂ ಸೂಕ್ತ ಊಟೋಪಚಾರದ ವ್ಯವಸ್ಥೆ ಕಲ್ಪಿಸಬೇಕು ಎಂದರು. ಅಕ್ಷರ ಆವಿಷ್ಕಾರ ಯೋಜನೆ ಅನುದಾನ ಬಳಸಿಕೊಂಡು, ಜಿಲ್ಲೆಯ ಶಾಲಾ ಕೊಠಡಿಗಳ ದುರಸ್ತಿಗೆ ಶೀಘ್ರ ಕ್ರಮ ಕೈಗೊಳ್ಳುವಂತೆ, ಸಚಿವರು ಅಧಿಕಾರಿಗಳಿಗೆ ಸೂಚಿಸಿದರು.

<><><>

ಇಲ್ಲಿಗೆ ಪ್ರದೇಶ ಸಮಾಚಾರ ಮುಕ್ತಾಯವಾಯಿತು.

ನಮ್ಮ ಮುಂದಿನ ರಾಷ್ಟ್ರೀಯ ವಾರ್ತಾ ಪ್ರಸಾರ 1 ಗಂಟೆ 10 ನಿಮಿಷಕ್ಕೆ..

<><><>